ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-01**

ಸಂಖ್ಯೆ: DPI-CPI0ADM2(OTH)/64/2026/**E-2058895**

ದಿನಾಂಕ : 16-04-2026

***** ಸುತ್ತೋಲೆ*****

**ವಿಷಯ** : ರಾಜ್ಯದ ಸರ್ಕಾರಿ/ಅನುದಾನಿತ/ಅನುದಾನ ರಹಿತ ಶಾಲೆಗಳಲ್ಲಿ ಅಶ್ಲೀಲ ಹಾಡುಗಳಿಗೆ ಮಕ್ಕಳಿಂದ ನೃತ್ಯ ಮಾಡಿಸುತ್ತಿರುವುದನ್ನು ನಿರ್ಬಂಧಿಸುವ ಕುರಿತು.

**ಉಲ್ಲೇಖ** : ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಬಣ ಬೆಂಗಳೂರು ಘಟಕದ ಅಧ್ಯಕ್ಷರ ಪತ್ರ ದಿನಾಂಕ : 07.01.2026.

***

ವಿಷಯಕ್ಕೆ ಸಂಬಂಧಿಸಿದಂತೆ, ಶಾಲೆಯು ಮಕ್ಕಳಿಗೆ ಜ್ಞಾನ ದೇಗುಲವಿದ್ದಂತೆ. ಪ್ರತಿ ಮಗುವಿನ ಬೆಳವಣಿಗೆ, ಸಂಸ್ಕಾರ, ವಿನಯತೆ, ಒಳ್ಳೆಯ ನಡತೆ, ಮಾನಸಿಕ ಸ್ಥಿತಿ, ಆರೋಗ್ಯ, ನೈತಿಕ ಮೌಲ್ಯಗಳು, ಮಗುವಿನ ಭವಿಷ್ಯದ ನಿರ್ಮಾಣ ಶಾಲೆಯಿಂದಲೇ ಪ್ರಾರಂಭವಾಗುವುದು ಹಾಗೂ ಶಾಲೆಯಿಂದಲೇ ಮಕ್ಕಳಿಗೆ ಒಂದು ಉತ್ತಮ ಭವಿಷ್ಯ ನಿರ್ಮಾಣವಾಗುವುದು.

ಶಾಲೆಯಲ್ಲಿ ಕಲಿಸಿದ ಉತ್ತಮ ಶಿಕ್ಷಣದಿಂದಾಗಿ, ಇಂದಿನ ಮಕ್ಕಳೇ ನಾಳಿನ ಉತ್ತಮ ಪ್ರಜೆಗಳಾಗುವರು. ಅಂತಹ ವಿದ್ಯಾರ್ಥಿಗಳಿಂದ ಶಾಲೆಗಳಲ್ಲಿ, ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸುವಾಗ ಕೆಲವು ವೇಳೆ ಅಶ್ಲೀಲ ಹಾಡುಗಳು ಮತ್ತು ನೃತ್ಯಗಳನ್ನು ಪ್ರದರ್ಶಿಸಲಾಗುತ್ತಿದೆ. ಈ ರೀತಿ ನೃತ್ಯಗಳನ್ನು ಪ್ರದರ್ಶಿಸಿದರೆ ಮಕ್ಕಳ/ವಿದ್ಯಾರ್ಥಿಗಳ ಮಾನಸಿಕ ಆರೋಗ್ಯ ಮತ್ತು ನೈತಿಕ ಮೌಲ್ಯಗಳ ಮೇಲೆ ಕೆಟ್ಟ ಪರಿಣಾಮ ಬೀರಿದಂತಾಗುತ್ತದೆ ಹಾಗೂ ಅಶಿಸ್ತು ಮೂಡಿಸಿದಂತಾಗುತ್ತದೆ **ಹಾಗೂ ಶಿಕ್ಷಣದ ಪ್ರಾವಿತ್ರ್ಯತೆಗೆ ಧಕ್ಕೆ ಉಂಟುಮಾಡಿದಂತಾಗುತ್ತದೆ**.

ಆದ್ದರಿಂದ ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನ ರಹಿತ ಶಾಲೆಗಳಲ್ಲಿ ಮಕ್ಕಳಿಂದ/ವಿದ್ಯಾರ್ಥಿಗಳಿಂದ ಅಶ್ಲೀಲ ಹಾಡುಗಳಿಗೆ ನೃತ್ಯ ಮಾಡಿಸುತ್ತಿರುವುದನ್ನು ನಿರ್ಬಂಧಿಸಲು ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ) ಶಾಲಾ ಶಿಕ್ಷಣ ಇಲಾಖೆ ರವರು ಈ ಕೆಳಕಂಡಂತೆ ಕಟ್ಟು ನಿಟ್ಟಿನ ಕ್ರಮಗಳನ್ನು ಕೈಗೊಳ್ಳಲು ತಿಳಿಸಿದೆ. ಒಂದು ವೇಳೆ ಅಶ್ಲೀಲ ಹಾಡುಗಳಿಗೆ ಮಕ್ಕಳಿಂದ ನೃತ್ಯ ಮಾಡಿಸುವುದು ಕಂಡು ಬಂದಲ್ಲಿ ಅಂತಹ ಶಾಲಾ ಮುಖ್ಯ ಶಿಕ್ಷಕರು/ಆಡಳಿತ ಮಂಡಳಿಯ ಮೇಲೆ ಸೂಕ್ತ ಕ್ರಮ ಕೈಗೊಳ್ಳಲು ತಿಳಿಸಿದೆ.

1. ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸುವಾಗ ಮಕ್ಕಳಿಂದ ಅಶ್ಲೀಲ ಹಾಡುಗಳಿಗೆ ನೃತ್ಯಗಳನ್ನು ಮಾಡಿಸುವುದನ್ನು ಕಟ್ಟುನಿಟ್ಟಾಗಿ ನಿರ್ಬಂಧಿಸುವುದು.
2. ಮಕ್ಕಳಿಗೆ ಸ್ಫೂರ್ತಿದಾಯಕ/ಸಕಾರಾತ್ಮಕ /ರಾಷ್ಟ್ರಾಭಿಮಾನ ಮೂಡಿಸುವ ಹಾಗೂ ಕನ್ನಡ ನಾಡಿನ ಹಿರಿಮೆ, ಗರಿಮೆ, ಮೌಲ್ಯಾಧಾರಿತ, ಸಂಸ್ಕಾರ, ನೈತಿಕತೆ, ಇರುವಂತಹ ಹಾಡುಗಳನ್ನು ಆಯ್ಕೆ ಮಾಡುವುದು.
3. ವಿದ್ಯಾರ್ಥಿಗಳಲ್ಲಿ ಸಾಂಸ್ಕೃತಿಕ ಮತ್ತು ನೈತಿಕ ಮೌಲ್ಯಗಳನ್ನು ಬೆಳಸುವಂತಹ ಹಾಡುಗಳನ್ನು ಆಯ್ಕೆ ಮಾಡುವುದು.
4. ಹಾಡುಗಳ ಮತ್ತು ನೃತ್ಯಗಳ ಆಯ್ಕೆಯಲ್ಲಿ ಶಾಲೆಯ ಮುಖ್ಯ ಶಿಕ್ಷಕರು ಹಾಗೂ ಶಾಲಾ ಆಡಳಿತ ಮಂಡಳಿ ಜವಾಬ್ದಾರಿಯನ್ನು ನಿಭಾಯಿಸುವುದು.
5. ಮಕ್ಕಳು/ವಿದ್ಯಾರ್ಥಿಗಳು ನೃತ್ಯ ಕಾರ್ಯಕ್ರಮಗಳಲ್ಲಿ ಅಥವಾ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಸಭ್ಯ ಉಡುಪುಗಳನ್ನು ಧರಿಸಲು ಕ್ರಮವಹಿಸುವುದು.

17/4/2026

**ನಿರ್ದೇಶಕರು(ಪ್ರಾಥಮಿಕ ಶಿಕ್ಷಣ)**

ಇವರಿಗೆ,

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ರವರುಗಳ ಸೂಕ್ತ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳ, ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ (ಸಂಬಂಧಿಸಿದ ಉಪನಿರ್ದೇಶಕರುಗಳ ಮುಖಾಂತರ)
3. ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನ ರಹಿತ ಶಾಲೆಗಳ ಮುಖ್ಯ ಶಿಕ್ಷಕರಿಗೆ (ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ)

**ಪ್ರತಿಯನ್ನು**

1. ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಬಹುಮಹಡಿ ಕಟ್ಟಡ ಬೆಂಗಳೂರು ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ
2. ಅಪರ ಆಯುಕ್ತರು, ಶಾಲಾಶಿಕ್ಷಣ ಇಲಾಖೆ ಧಾರವಾಡ/ಕಲಬುರ್ಗಿ
3. ಇಲಾಖಾ ವೆಬ್ ಸೈಟ್ ನಲ್ಲಿ ಪ್ರಕಟಣೆಗಾಗಿ ಇ-ಆಡಳಿತ ಶಾಖೆಗೆ
4. ಕಛೇರಿ ಪ್ರತಿ.